ಎಂದು ಹೇಳಿ ನಾಳೆ ನೀವೂ ಒಂದು ಫೋಟೋ ಹಾಕಿಸಿಕೊಳ್ಳಿ. ಆದ್ದರಿಂದ, ಈಗ ಫೈನಾನ್ಸ್ ಬಿಲ್‌ಗಳನ್ನು ತೆಗೆದುಕೊಳ್ಳಬಹುದು.

ಅಧ್ಯಕ್ಷರು : ಆಯಿತು, ಈಗ ಅಜೆಂಡಾ ಪ್ರಕಾರ ಹೋಗೋಣ. ಮೊದಲಿಗೆ ವರದಿಗಳನ್ನೊಪ್ಪಿಸುವುದು.

2. ವರದಿಗಳನ್ನೊಪ್ಪಿಸುವುದು :

ಶ್ರೀಮತಿ ವಿಜಯಲಕ್ಷ್ಮಿ ಬಂಡಿಸಿದ್ದೇಗೌಡ (ಶ್ರೀರಂಗಪಟ್ಟಣ) : ಮಾನ್ಯ ಅಧ್ಯಕ್ಷರೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷೆಯಾದ ನಾನು ವೈದ್ಯಕೀಯ ಹಾಗೂ ನರ್ಸಿಂಗ್ ವಿದ್ಯಾರ್ಥಿ ನಿಲಯದ ಮಹಿಳಾ ನಿವಾಸಿಗಳ ಸಮಸ್ಯೆಗಳ ಕುರಿತು ನೀಡಿದ 1995–96ನೇ ಸಾಲಿನ ಸಮಿತಿಯ ಮೂರನೇ ವರದಿಯ ಶಿಫಾರಸ್ಸುಗಳ ಬಗ್ಗೆ ಸರ್ಕಾರ ತೆಗೆದುಕೊಂಡು ಕ್ರಮಗಳ ಮೇಲಿನ ಅನುಸರಣಾ ವರದಿಯನ್ನು ಒಪ್ಪಿಸುತ್ತೇನೆ.

(ಆ) ಬೆಂಗಳೂರಿನ ಕೇಂದ್ರಿಯ ಕಾರಾಗೃಹದ ಮಹಿಳಾ ಖೈದಿಗಳ ಸ್ಥಿತಿಗತಿ ಕುರಿತು 1995–96ನೇ ಸಾಲಿನ ಸಮಿತಿಯ ಎರಡನೇ ವರದಿಯ ಶಿಫಾರಸ್ಸುಗಳ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳ ಮೇಲಿನ ಅನುಸರಣಾ ವರದಿಯನ್ನು ಸಭೆಗೆ ಒಪ್ಪಿಸುತ್ತೇನೆ.

ಅಧ್ಯಕ್ಷರು : ವರದಿಗಳನ್ನೊಪ್ಪಿಸಲಾಯಿತು.

(3) ಶಾಸನ ರಚನೆ :

(1) ವಿಧೇಯಕಗಳ ಮಂಡನೆ

ಅ. ಕರ್ನಾಟಕ ವಿಧಾನಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2005

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹೆಚ್. ಕೆ. ಪಾಟೀಲ್: (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, 2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಏನೆಂದರೆ;

"2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೇ, "2005ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳು, ನಿವೃತ್ತಿ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ 1

ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 2005.

(ಅ) ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, "2005ನೇ ಸಾಲಿನ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೇ,

"2005ನೇ ಸಾಲಿನ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ "2005ನೇ ಸಾಲಿನ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕ, 2005.

ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"200ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್. ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : (ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, "200ನೇ ಸಾಲಿನ ದಂಡ ಪ್ರಕ್ರಿಯಾ ಸಂಹಿತೆ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

ಅನುಬಂಧ 3

(2) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು.